## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2012-13ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಪರಿಶಿಷ್ಟ ಪಂಗಡಗಳ ಶ್ರೀ.ಮಹರ್ಷಿ ವಾಲ್ಮೀಕಿ ಹಾಗೂ ಶ್ರೀ.ಕೇತೇಶ್ವರ ಮೇದಾರ ಸಮುದಾಯಗಳ ಕ್ಷೇಮಾಭಿವೃದ್ಧಿ ಮತ್ತು ಗುರುಪೀಠಗಳಿಗೆ ಶೈಕ್ಷಣಿಕ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನ ಬಿಡುಗಡೆ ಬಗ್ಗೆ.

**ಓದಲಾಗಿದೆ:**

1) ದಿನಾಂಕ:28-04-2012ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆ ನಡವಳಿ
2) ಸರ್ಕಾರಿ ಆದೇಶ ಸಂಖ್ಯೆ: ಸಕಇ 47 ಎಸ್‌ಎಲ್‌ಪಿ 2012 ದಿನಾಂಕ:22-05-2012
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಪತ್ರ ಸಂಖ್ಯೆ:ಪವಕನಿ/ಇಡಿ-2/ಸಿಆರ್-36/2012-13, ದಿನಾಂಕ 29-12-2012.

ಪ್ರಸ್ತಾವನೆ:-

ಮೇಲೆ (1)ರಲ್ಲಿ ಓದಲಾದ ದಿನಾಂಕ:28-04-2012 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ 2012-13ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಪರಿಶಿಷ್ಟ ಪಂಗಡಗಳ ಶ್ರೀ.ಮಹರ್ಷಿ ವಾಲ್ಮೀಕಿ ಹಾಗೂ ಕೇತೇಶ್ವರ ಮೇದಾರ ಸಮುದಾಯಗಳ ಕ್ಷೇಮಾಭಿವೃದ್ಧಿ ಮತ್ತು ಗುರುಪೀಠಗಳ ಶೈಕ್ಷಣಿಕ ಮತ್ತು ಮೂಲಭೂತ ಸೌಕರ್ಯಕ್ಕಾಗಿ ಪರಿಶಿಷ್ಟ ಪಂಗಡದ ಉಪ ಯೋಜನೆಯಡಿ ಅನುದಾನ ಒದಗಿಸಲು ತೀರ್ಮಾನಿಸಲಾಗಿತ್ತು. ಅದರಂತೆ ಸದರಿ ಕಾರ್ಯಕ್ರಮಕ್ಕೆ ಮೇಲೆ ಓದಲಾದ ಕ್ರಮಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ 2012-13ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಉಪಯೋಜನೆಯ ಕ್ರೋಢೀಕರಿಸಿದ ಅನುದಾನ ರೂ. 375.00 ಕೋಟಿಗಳಲ್ಲಿ ರೂ.6.00 ಕೋಟಿಗಳನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರು 2012-13ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಪರಿಶಿಷ್ಟ ಪಂಗಡಗಳ ಶ್ರೀ.ಮಹರ್ಷಿ ವಾಲ್ಮೀಕಿ ಹಾಗೂ ಶ್ರೀ.ಕೇತೇಶ್ವರ ಮೇದಾರ ಸಮುದಾಯಗಳ ಕ್ಷೇಮಾಭಿವೃದ್ಧಿ ಮತ್ತು ಗುರುಪೀಠಗಳಿಗೆ ಶೈಕ್ಷಣಿಕ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನ ನೀಡುವ ಬಗ್ಗೆ ಘೋಷಣೆಯಾಗಿರುವುದರಿಂದ ಪರಿಶಿಷ್ಟ ಪಂಗಡದ ಉಪ ಯೋಜನೆಯ ಕ್ರೋಡೀಕೃತ ಅನುದಾನ ಲೆಕ್ಕಶೀರ್ಷಿಕೆ 2225-02-283-0-02ರ ಅಡಿಯಲ್ಲಿ ಅನುದಾನ ಬಿಡುಗಡೆ ಮಾಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ. ಶ್ರೀ.ಮಹರ್ಷಿ ವಾಲ್ಮೀಕಿ ಗುರುಪೀಠ ರಾಜನಹಳ್ಳಿ, ಹರಿಹರ ತಾಲ್ಲೂಕು, ದಾವಣಗೆರೆ. ಇವರು ರೂ.5.00 ಕೋಟಿ ಹಾಗೂ ಶ್ರೀ ಕೇತೇಶ್ವರ ಮಹಾ ಮಠ, ಮೇದಾರ ಗುರುಪೀಠ, ಚಿತ್ರದುರ್ಗ ಇವರು ರೂ. 3.50 ಕೋಟಿಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿದ್ದು, ಇವರುಗಳು ಕೋರಿರುವ ಅನುದಾನ, ಕಾರ್ಯಕ್ರಮಗಳ ಉದ್ದೇಶ, ಗುರುಪೀಠಗಳ ನೋಂದಣಿ ಬಗ್ಗೆ, ಗುರುಪೀಠ ಹೊಂದಿರುವ

ಜಮೀನಿನ ವಿವರ, ಆಡಿಟ್ ವರದಿ, ಕಾಮಗಾರಿಯ ಅಂದಾಜು ಪಟ್ಟಿ ಮತ್ತು ನಕ್ಷೆ ತಯಾರಿಸಿ ಸರ್ಕಾರಕ್ಕೆ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 02 ಪವಯೋ 2013, ಬೆಂಗಳೂರು**
**ದಿನಾಂಕ:21-02-2013**

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ 2012-13ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಪರಿಶಿಷ್ಟ ಪಂಗಡಗಳ ಉಪಯೋಜನೆ ಕ್ರೋಢೀಕೃತ ಅನುದಾನ ಲೆಕ್ಕಶೀರ್ಷಿಕೆ 2225-02-283-0-02 (ಯೋಜನೆ) ರಡಿಯಲ್ಲಿ ಹಂಚಿಕೆ ಮಾಡಿ ಈ ಕೆಳಕಂಡ ಗುರುಪೀಠಗಳಿಗೆ ಸಮುದಾಯದ ಕ್ಷೇಮಾಭಿವೃದ್ಧಿ, ಶೈಕ್ಷಣಿಕ ಮತ್ತು ಮೂಲಭೂತ ಸೌಕರ್ಯಕ್ಕಾಗಿ ಅನುದಾನ ಬಿಡುಗಡೆ ಮಾಡಿ ಸರ್ಕಾರವು ಆದೇಶಿಸಿದೆ.

**(ರೂ. ಕೋಟಿಗಳಲ್ಲಿ)**

| | | |
|---|---|---|
| 1 | ಶ್ರೀ.ಮಹರ್ಷಿ ವಾಲ್ಮೀಕಿ ಗುರುಪೀಠ ಟ್ರಸ್ಟ್, ಹರಿಹರ ತಾಲ್ಲುಕು, ದಾವಣಗೆರೆ ಜಿಲ್ಲೆ. | 3.50 |
| 2 | ಶ್ರೀ.ಕೇತೇಶ್ವರ ಮೇದಾರ ಗುರುಪೀಠ ಚಿತ್ರದುರ್ಗ ಜಿಲ್ಲೆ | 2.50 |
| | **ಒಟ್ಟು** | 6.00 |

**(ಆರು ಕೋಟಿ ರೂಪಾಯಿಗಳು ಮಾತ್ರ)**

2012-13ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಕ್ರೋಢೀಕೃತ ಅನುದಾನ ಲೆಕ್ಕಶೀರ್ಷಿಕೆ 2225-02-283-0-02 (ಯೋಜನೆ)ರಡಿ ಒದಗಿಸಿದ ಅನುದಾನದಲ್ಲಿ ಭರಿಸುವುದು.

ಈ ಅನುದಾನವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗೆ ನೀಡಿ, ಸದರಿ ಗುರುಪೀಠಗಳು ಕೋರಿರುವ ಉದ್ದೇಶಗಳಿಗೆ ಮಾತ್ರ ಶಿಕ್ಷಣ ಮತ್ತು ಮೂಲಭೂತ ಕಾಮಗಾರಿಗಳ ಪ್ರಗತಿಯನ್ನಾಧರಿಸಿ ಬಿಡುಗಡೆ ಮಾಡುವುದು. ನೀಡಿದ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರ ಪಡೆದು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 116 ವೆಚ್ಚ -3/13, ದಿನಾಂಕ: 13-02-2013ರಲ್ಲಿ ನೀಡಿದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

ಗೆ:-

1) ಮಹಾಲೇಖಪಾಲರು, (ಲೆಕ್ಕ ಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು
2) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
3) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಹಾಗೂ ,ದಾವಣಗೆರೆ ಜಿಲ್ಲೆ.
4) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕೆ.ಆರ್.ವೃತ್ತ, ಬೆಂಗಳೂರು
5) ಉಪ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು
6) ಮಾನ್ಯ ಸಮಾಜ ಕಲ್ಯಾಣ, ಬಂಧೀಖಾನೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8) ಸರ್ಕಾರದ ಉಪಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 & 9), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
10)ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು